# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 22-11-2016ರಂದು ಮಧ್ಯಾಹ್ನ 3.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಮುಖ್ಯ ಲೆಕ್ಕಾಧಿಕಾರಿಗಳು |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | ಉಪ ನಿಯಂತ್ರಕರು (ಹಣಕಾಸು) |
| 3. | ಎನ್.ಉಮಾ | – ಸದಸ್ಯರು | ಕೌನ್ಸಿಲ್ ಕಾರ್ಯದರ್ಶಿಗಳು |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಎ.ಸಿ. (ಆಡಿಟ್ ಸೆಲ್) |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | ಎ.ಓ (ಆಡಿಟ್ ಸೆಲ್) |
| 6. | ವಿ.ಸುರೇಶ್ | – ಸದಸ್ಯರು | ಸ.ನಿ.(ಹಣಕಾಸು) |
| 7. | ಹೆಚ್.ಕುಸುಮಾ | – ಸದಸ್ಯರು | ಸ.ನಿ.(ಆಡಿಟ್ ಸೆಲ್) |
| 8. | ಎಂ.ಮಾಲತಿ | – ಸದಸ್ಯರು | ಮುಖ್ಯ ಅಭಿಯಂತರರು (ಪೂರ್ವ) |
| 9. | ಎಂ.ಶಾಮಲ | – ಸದಸ್ಯರು | ಉಪ ಆಯುಕ್ತರು (ಪೂರ್ವ) |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | ಆರೋಗ್ಯಾಧಿಕಾರಿಗಳು (ಪೂರ್ವ) |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | ತೋಟಗಾರಿಕೆ ಅಧೀಕ್ಷಕರು (ಪೂರ್ವ) |
| | | | ಸಂಬಂಧಪಟ್ಟ ಎಲ್ಲಾ ಸ.ಕಂ.ಅ.ಗಳು |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಸದಸ್ಯರುಗಳಿಗೆ ಮತ್ತು ಅಧಿಕಾರಿಗಳಿಗೆ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ನಂತರ ಸಮಿತಿಯ ಸದಸ್ಯರುಗಳು ಮತ್ತು ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ ಪೂರ್ವ ವಲಯಕ್ಕೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ 2013-14ನೇ ಸಾಲಿನ ಲೆಕ್ಕಪರಿಶೋಧನಾ ವರದಿಯಲ್ಲಿ ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ತೀರುವಳಿಯ ಬಗ್ಗೆ ಚರ್ಚಿಸುವ ಸಲುವಾಗಿ ಸಭೆಯನ್ನು ನಿಗಧಿಪಡಿಸಿ, ಸಮಿತಿಯು ಸಭೆಯ ತಿಳುವಳಿಕೆ ಪತ್ರವನ್ನು ಪೂರ್ವ ವಲಯ ಜಂಟಿ ಆಯುಕ್ತರವರಿಗೆ ಜಾರಿ ಮಾಡಿ ಸಭೆಗೆ ವಲಯದ ಇತರೆ ಅಧಿಕಾರಿಗಳೊಂದಿಗೆ ಹಾಜರಾಗುವಂತೆ ಕಳುಹಿಸಲಾಗಿದ್ದರೂ ಕೆಲವು ಅಧಿಕಾರಿಗಳು ಸಭೆಗೆ ಗೈರು

ಹಾಜರಾಗಿರುವುದರಿಂದ ಅಸಮಾಧಾನ ವ್ಯಕ್ತಪಡಿಸಿ, ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ನೋಟೀಸು ಜಾರಿ ಮಾಡುವಂತೆ ಹಾಜರಿದ್ದ ಉಪ ಆಯುಕ್ತರಿಗೆ ತಿಳಿಸಿದರು.

ಮುಂದುವರಿದು ಅಧ್ಯಕ್ಷರು ಮಾತನಾಡುತ್ತಾ, ಬೆಂಗಳೂರು ಮಹಾನಗರ ಪಾಲಿಕೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ ವಿಸ್ತಾರಗೊಂಡ ನಂತರದ ಅಂದರೆ 2006–07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು ಸಮಿತಿಯು ತೀರ್ಮಾನಿಸಿದ್ದು, ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ನಂತರ ಮುಖ್ಯ ಲೆಕ್ಕಾಧಿಕಾರಿಯವರು ಮಾತನಾಡುತ್ತಾ, ಪಾಲಿಕೆಯ ವ್ಯಾಪ್ತಿಯ ವಿವಿಧ ಕಛೇರಿಗಳಲ್ಲಿನ ವಾರ್ಷಿಕ ವರದಿಯಲ್ಲಿ ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಸಂಬಂಧಿಸಿದಂತೆ 1995–96ನೇ ಸಾಲಿನಿಂದ 2013–14ನೇ ಸಾಲಿನವರೆಗೆ ಒಟ್ಟು 15662 ಕಂಡಿಕೆಗಳು ಬಾಕಿ ಇದ್ದು, 2008–09ನೇ ಸಾಲಿನವರೆಗೆ ಲೆಕ್ಕ ಪರಿಶೋಧನೆಯ ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಉತ್ತಮ ಪ್ರತಿಕ್ರಿಯೆ ಇದ್ದು, ತದನಂತರ ಹೆಚ್ಚಿನ ಬೆಳವಣಿಗೆಗಳು ಇಲ್ಲದೆ ಇರುವುದು ಕಂಡುಬಂದಿದ್ದು, ಇದಕ್ಕೆ ಕಾರ್ಯಯೋಜನೆ ಇಲ್ಲದೆ ಇರುವುದೇ ಮುಖ್ಯ ಕಾರಣ ಎಂದು ತಿಳಿಸುತ್ತಾ, ಸಮಿತಿಯು 2006–07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು ತೀರ್ಮಾನಿಸಿದ್ದು, ಪೂರ್ವ ವಲಯಕ್ಕೆ ಸಂಬಂಧಿಸಿದಂತೆ ಇರುವ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮೊತ್ತ ಮತ್ತು ತೀರುವಳಿಗಳ ಬಗ್ಗೆ ಸಭೆಗೆ ಮಾಹಿತಿ ನೀಡುತ್ತಾ, ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ಸಿಬ್ಬಂದಿಗಳಿಗೆ ತಿಳಿಸಿದರು.

ನಂತರ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಉಪ ಆಯುಕ್ತರು ರವರಿಗೆ ಕೆ.ಎಂ.ಸಿ ಕಾಯ್ದೆ ಕಲಂ 440. 150ನೇ ಪ್ರಕರಣ ಮತ್ತು IX ನೇ ಅನುಸೂಚಿಯ ಮೇರೆಗಿನ ಕಡ್ಡಾಯ ಕೋರಿಕೆಯ ಉಲ್ಲಂಘನೆಗಾಗಿ ಎಷ್ಟು ಪ್ರಕರಣಗಳಿಗೆ ಜುಲ್ಮಾನೆಯನ್ನು ವಿಧಿಸಲಾಗಿರುತ್ತದೆ ಎಂಬುದರ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಪೂರ್ವ ವಲಯ ವ್ಯಾಪ್ತಿಯಲ್ಲಿ ಸದರಿ ನಿಯಮದ ಅಡಿಯಲ್ಲಿ ಯಾವುದೇ ದಂಡವನ್ನು ವಿಧಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ ಅಗತ್ಯ ಕ್ರಮವನ್ನು ವಹಿಸಲಾಗುವುದೆಂದು ಹಾಜರಿದ್ದ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಮುಂದುವರಿದು ಪೂರ್ವ ವಲಯಕ್ಕೆ ಸಂಬಂಧಿಸಿದಂತೆ ಬಾಕಿ ಇರುವ ಕಂಡಿಕೆಗಳಿಗೆ, ಆಕ್ಷೇಪಣೆಗಳಿಗೆ ಹಾಗೂ ವಸೂಲಾತಿ ತೀರುವಳಿಯ ಬಗ್ಗೆ ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು ಸಭೆಗೆ ನೀಡಲು ಸೂಚಿಸಿದಾಗ, ಪೂರ್ವ ವಲಯದಲ್ಲ ಲೆಕ್ಕ ಪರಿಶೋಧನಾ ವರದಿಗಳ ಆಕ್ಷೇಪಣೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಅಧೀನ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದು, ಪರಿಶೀಲಿಸಿ ಸಮಿತಿಗೆ ಸಮರ್ಪಕವಾದ ಮಾಹಿತಿಯನ್ನು ಸಲ್ಲಿಸುವುದಾಗಿ ಉಪ ಆಯುಕ್ತರವರು ತಿಳಿಸಿದರು. ಮುಂದುವರಿದು ಅಧ್ಯಕ್ಷರು ಇನ್ನು ಮುಂದೆ ವಲಯ ಮಟ್ಟದಲ್ಲಿ ಪ್ರತಿ ತಿಂಗಳಿಗೊಮ್ಮೆ ಲೆಕ್ಕಪತ್ರ ನಿರ್ವಹಣೆ ಕುರಿತಂತೆ ಅಧೀನ ಕಛೇರಿಗಳ ಅಧಿಕಾರಿಗಳೊಂದಿಗೆ ಸಭೆಯನ್ನು ನಿಗಧಿಪಡಿಸಿ, ಚರ್ಚಿಸಿ ಕಾಲಕಾಲಕ್ಕೆ ಸಮಿತಿಗೆ ವರದಿಯನ್ನು ಸಲ್ಲಿಸಲು ಹಾಗೂ ಮುಂದಿನ ದಿನಗಳಲ್ಲಿ ಸಮಿತಿಯು ನಡೆಸುವ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಬೇಕೆಂದು ಸೂಚಿಸಲಾಯಿತು.

ನಂತರ ಸದಸ್ಯರಾದ ಶ್ರೀ.ಎಂ.ಗೌತಮ್ ಕುಮಾರ್ ರವರು ಸಭೆಯಲ್ಲಿ ಅಭಿವೃದ್ದಿ ಶುಲ್ಕಕ್ಕೆ ಸಂಬಂಧಿಸಿದಂತೆ ಚರ್ಚಿಸುತ್ತಾ ಅಭಿವೃದ್ದಿ ಶುಲ್ಕದ ಬಗ್ಗೆ ನ್ಯಾಯಾಲಯದಲ್ಲಿ ಇದ್ದ ದಾವೆಯು ಇತ್ಯರ್ಥಗೊಂಡಿರುವುದಾಗಿ ತಿಳಿದು ಬಂದಿದ್ದು, ಹಲವಾರು ಪ್ರಕರಣಗಳಲ್ಲಿ ಅಭಿವೃದ್ದಿ ಶುಲ್ಕವನ್ನು ವಸೂಲು ಮಾಡದೇ ಖಾತಾ ನೊಂದಾವಣೆ ಮಾಡಿರುವುದಾಗಿ ದೂರುಗಳು ಬರುತ್ತಿದ್ದು, ಈ ನಿಟ್ಟಿನಲ್ಲೂ ಲೆಕ್ಕ ಪರಿಶೋಧನೆ ಆಕ್ಷೇಪಣೆಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ವಿಳಂಭವಾಗುತ್ತಿರುವುದಾಗಿ ಈ ಬಗ್ಗೆ ವಾಸ್ತವಾಂಶದ ಮಾಹಿತಿಯನ್ನು ಸಭೆಗೆ ನೀಡಲು ತಿಳಿಸಿದಾಗ, ಹಾಜರಿದ್ದ ಅಧಿಕಾರಿಗಳು ಕೆಲವು ಪ್ರಕರಣಗಳಲ್ಲಿ ಅಫೀಡವಿಟ್‌ಗಳನ್ನು ಪಡೆದು ನಿವೇಶನಗಳಿಗೆ ಖಾತಾ ನೊಂದಾವಣೆ ಮಾಡಿದ್ದು, ಇನ್ನು ಕೆಲವು ಪ್ರಕರಣಗಳಲ್ಲಿ ನಿವೇಶನದಾರರು ಶೇಕಡ 50ರಷ್ಟು ಶುಲ್ಕವನ್ನು ಪಾವತಿಸಿದ್ದು ಕೆಲವೊಂದು ಪ್ರಕರಣಗಳಲ್ಲಿ ವ್ಯತ್ಯಾಸದ ಮೊತ್ತವನ್ನು ಪಾವತಿಸಿಕೊಳ್ಳಬೇಕಾಗಿದ್ದು, ಇನ್ನೂ ಕೆಲವು ಪ್ರಕರಣಗಳಲ್ಲಿ ವಿಭಜನೆ ಮಾಡಿ ಖಾತಾ ಮಾಡಲು ಅವಕಾಶ ಇಲ್ಲದೆ ಇರುವುದರಿಂದ ವಸೂಲು ಮಾಡಲು ಸಾಧ್ಯವಿರುವುದಿಲ್ಲವೆಂದು ಹಾಗೂ ನ್ಯಾಯಾಲಯದ ಆದೇಶದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದೆಂದು ಮಾಹಿತಿ ನೀಡಿದಾಗ, ಮಾನ್ಯ ಸದಸ್ಯರು ಅಭಿವೃದ್ದಿ ಶುಲ್ಕವನ್ನು ಪಾವತಿಸದೇ ನಿರ್ಮಾಣ ಮಾಡುತ್ತಿರುವ ಕಟ್ಟಡಗಳ ಕಾಮಗಾರಿಯನ್ನು ಸ್ಥಗಿತಗೊಳಿಸಬೇಕೆಂದು, ಕಟ್ಟಡಗಳಿಗೆ ನಕ್ಷೆ ಮಂಜೂರಾತಿ ನೀಡುವಾಗ ನಿಯಮಾನುಸಾರ ಸದರಿ ನಿವೇಶನಕ್ಕೆ ಅಭಿವೃದ್ದಿ ಶುಲ್ಕವನ್ನು ಪಾವತಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ಸಂಬಂಧಪಟ್ಟ ಅಭಿಯಂತರರು ನಕ್ಷೆ ಮಂಜೂರಾತಿಯನ್ನು ನೀಡಬೇಕೆಂದು ಸೂಚಿಸಲಾಯಿತು. ಅಲ್ಲದೆ ನಿವೇಶನಗಳಿಗೆ ಕಂದಾಯವನ್ನು ನಿಗಧಿಪಡಿಸುವಾಗ

ಅಳತೆಗಳಲ್ಲಿ ವ್ಯತ್ಯಾಸಗಳನ್ನು ಮಾಡುತ್ತಿರುವುದಾಗಿ ದೂರಗಳು ಬರುತ್ತಿದ್ದು, ಈ ಬಗ್ಗೆ ಮರು ಪರಿಶೀಲನೆ ಮಾಡಿ ಕಂದಾಯವನ್ನು ನಿಗದಿಪಡಿಸಬೇಕೆಂದು ಸಹ ಸೂಚಿಸಲಾಯಿತು.

ಮುಂದುವರಿದು ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ಅಧೀಕ್ಷಕರು (ಪೂರ್ವ) ರವರ ಕಛೇರಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಕಛೇರಿ ವಿಷಯ ನಿರ್ವಾಹಕರು ಯಾವುದೇ ಸಮರ್ಪಕ ಮಾಹಿತಿಯನ್ನು ಸಭೆಗೆ ನೀಡುವಲ್ಲಿ ವಿಫಲರಾಗಿರುತ್ತಾರೆ. ಸದರಿಯವರಿಗೆ ಪೂರ್ವ ವಲಯ ವ್ಯಾಪ್ತಿಯಲ್ಲಿ ತೋಟಗಾರಿಕಾ ಅಧೀಕ್ಷಕರವರ ಕಛೇರಿಯಿಂದ ನಿರ್ವಹಣೆ ಮಾಡುತ್ತಿರುವ ಉದ್ಯಾನವನಗಳ ವಿವರ, ಅವುಗಳ ನಿರ್ವಹಣೆಗೆ ಸಂಬಂಧಪಟ್ಟ ಸಂಪೂರ್ಣ ಕಡತಗಳನ್ನು ಸಮಿತಿಯ ಕಛೇರಿಗೆ ಪರಿಶೀಲನೆಗೆ ತರಲು ಸೂಚಿಸಲಾಯಿತು.

ನಂತರ ಹಾಜರಿದ್ದ ವಲಯ ಸಹಾಯಕ ನಿಯಂತ್ರಕರು (ಹಣಕಾಸು–ದಕ್ಷಿಣ) ರವರಿಗೆ ಅವರ ಕಛೇರಿಯ ಕಾರ್ಯವ್ಯಾಪ್ತಿಯ ಬಗ್ಗೆ ಸಭೆಗೆ ಮಾಹಿತಿ ನೀಡಲು ಸೂಚಿಸಲಾಗಿ, ಸದರಿಯವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ವಲಯ ವ್ಯಾಪ್ತಿಯ ಕಛೇರಿಗಳಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಚರ್ಚಿಸಲು ಹಲವಾರು ಸಭೆಗಳನ್ನು ನಡೆಸಿರುವುದಾಗಿ ತಿಳಿಸಿದ್ದು, ಆದಾಗ್ಯೂ ಆಡಿಟ್ ವರದಿಗಳಿಗೆ ಸಮರ್ಪಕವಾಗಿ ಉತ್ತರಗಳನ್ನು ಸಲ್ಲಿಸುವಲ್ಲಿ ಅಧಿಕಾರಿ/ಸಿಬ್ಬಂದಿಗಳು ವಿಫಲರಾಗಿರುತ್ತಾರೆ, ಈ ನಿಟ್ಟಿನಲ್ಲಿ ಇನ್ನು ಮುಂದೆ ಸಕ್ರಿಯವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸುತ್ತಾ, ಸಹಾಯಕ ನಿಯಂತ್ರಕರು ಹಣಕಾಸು ರವರಿಗೆ ಯಾವುದೇ ಹೆಚ್ಚಿನ ಅಧಿಕಾರ ಪ್ರತ್ಯಾಯೋಜನೆ ಮಾಡಿರುವುದಿಲ್ಲವೆಂದು, ಮುಖ್ಯವಾಗಿ ವಲಯ ವ್ಯಾಪ್ತಿಯ ಅಧೀನ ಕಛೇರಿಗಳಿಂದ ಸಲ್ಲಿಸುವ ವಿವಿಧ ವೆಚ್ಚಗಳಿಗೆ ಸಂಬಂಧಿಸಿದ ಬಿಲ್‌ಗಳನ್ನು ಪಾವತಿಸುವುದು ಇತ್ಯಾದಿ ಕರ್ತವ್ಯಗಳನ್ನು ನಿರ್ವಹಿಸುವುದಾಗಿ ತಿಳಿಸಿದಾಗ, ಯಾವುದೇ ಬಿಲ್‌ಗಳನ್ನು ಪಾವತಿಸುವ ಮುಂಚಿತವಾಗಿ ಸದರಿ ಕಛೇರಿಯವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ಬಿಲ್‌ಗಳನ್ನು ಪಾವತಿಸುವಂತೆ ಕ್ರಮವಹಿಸಬೇಕೆಂದು ಸೂಚಿಸಲಾಯಿತು.

ಮುಂದುವರಿದು ಸಮಿತಿಯ ಸದಸ್ಯರಾದ ಶ್ರೀಯುತ. ಎಂ.ಗೌತಮ್ ಕುಮಾರ್ ರವರು ಮಾತನಾಡುತ್ತಾ, ಸಮಿತಿಯು ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು, ಪಾಲಿಕೆಯನ್ನು ಆರ್ಥಿಕ ಅಭಿವೃದ್ಧಿಯತ್ತ ಕೊಂಡೊಯ್ಯುವ ನಿಟ್ಟಿನಲ್ಲಿ ಲೆಕ್ಕಪತ್ರ ವಿಭಾಗದಲ್ಲಿ ಕೆಲವೊಂದು ಬದಲಾವಣೆಗಳನ್ನು ತರಲು ಉದ್ದೇಶಿಸಿದ್ದು, ಅದಕ್ಕೆ ಪೂರಕವಾಗಿ ಲೆಕ್ಕ ಪರಿಶೋಧನಾ ವರದಿಯಲ್ಲಿನ

ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ನಿಗಧಿತ ಅವಧಿಯಲ್ಲಿ ಅನುಸರಣಾ ವರದಿಯನ್ನು ಸಲ್ಲಿಸಲು ಕ್ರಮ ಕೈಗೊಳ್ಳಬೇಕೆಂದು, ಈ ನಿಟ್ಟಿನಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಕಛೇರಿಯ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಅಲ್ಲದೆ ಸಮಿತಿಯು ಯಾವುದೇ ಸಮಯದಲ್ಲಿ ಕಛೇರಿಗಳಿಗೆ ತಪಾಸಣೆಗೆ ಬರುವುದಾಗಿ ತಿಳಿಸಿ, ತಪಾಸಣಾ ಸಂದರ್ಭದಲ್ಲಿ ಲೆಕ್ಕಪತ್ರ ನಿರ್ವಹಣೆಯಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಅಧಿಕಾರಿಗಳ ವಿರುದ್ದ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದೆಂದು ಸೂಚಿಸುತ್ತಾ, ವಲಯ ಸಹಾಯಕ ನಿಯಂತ್ರಕರು (ಹಣಕಾಸು)ರವರಿಗೆ ವಲಯ ವ್ಯಾಪ್ತಿಯ ಕಛೇರಿಗಳಲ್ಲಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ಬಿಲ್‌ಗಳನ್ನು ಪಾವತಿಸಲು ಕ್ರಮ ವಹಿಸಬೇಕೆಂದು ಸೂಚಿಸಲಾಯಿತು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಮುಂದಿನ ಸಭೆಯ ದಿನಾಂಕದೊಳಗೆ ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಈ ನಿಟ್ಟಿನಲ್ಲಿ ಸಮಿತಿಯು ಮುಂಬರುವ ದಿನಗಳಲ್ಲಿ ತಪಾಸಣೆಯನ್ನು ಹಮ್ಮಿಕೊಳ್ಳುವುದಾಗಿ, ತಪಾಸಣಾ ಸಂದರ್ಭದಲ್ಲಿ ಯಾವುದೇ ನ್ಯೂನತೆಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ವಿರುದ್ದ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸೂಚಿಸುತ್ತಾ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಅಪರ ಆಯುಕ್ತರು (ಆಡಳಿತ) ರವರಿಗೆ ಮಾಹಿತಿಗಾಗಿ
6.ಜಂಟಿ ಆಯುಕ್ತರರು (ಪೂರ್ವ) ರವರಿಗೆ ಅಗತ್ಯ ಕ್ರಮಕ್ಕಾಗಿ
7.ಉಪ ಆಯುಕ್ತರು (ಪೂರ್ವ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
8.ಕಛೇರಿ ಕಡತಕ್ಕೆ

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 22-11-2016 ರಂದು ಬೆಳಿಗ್ಗೆ 11.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | - ಅಧ್ಯಕ್ಷರು | ಮುಖ್ಯ ಲೆಕ್ಕಾಧಿಕಾರಿಗಳು |
| 2. | ಸವಿತಾ ವಿ.ಕೃಷ್ಣ | - ಸದಸ್ಯರು | ಉಪ ನಿಯಂತ್ರಕರು (ಹಣಕಾಸು) |
| 3. | ಎನ್.ಉಮಾ | - ಸದಸ್ಯರು | ಸ.ನಿ (ಆಡಿಟ್ ಸೆಲ್) |
| 4. | ರಾಧಮ್ಮ ವೆಂಕಟೇಶ್ | - ಸದಸ್ಯರು | ಎ.ಸಿ. (ಆಡಿಟ್ ಸೆಲ್) |
| 5. | ಜಿ.ಬಾಲಕೃಷ್ಣನ್ | - ಸದಸ್ಯರು | ಎ.ಓ (ಆಡಿಟ್ ಸೆಲ್) |
| 6. | ವಿ.ಸುರೇಶ್ | - ಸದಸ್ಯರು | ಜಂಟಿ ಆಯುಕ್ತರು (ಮಹದೇವಪುರ) |
| 7. | ಹೆಚ್.ಕುಸುಮಾ | - ಸದಸ್ಯರು | ಕೌನ್ಸಿಲ್ ಕಾರ್ಯದರ್ಶಿಗಳು |
| 8. | ಎಂ.ಮಾಲತಿ | - ಸದಸ್ಯರು | ಸಂಬಂಧಪಟ್ಟ ಎಲ್ಲಾ |
| 9. | ಎಂ.ಶಾಮಲ | - ಸದಸ್ಯರು | ಸಹ ಕಂದಾಯ ಅಧಿಕಾರಿಗಳು |
| 10. | ಕೆ.ವಿ.ರಾಜೇಂದ್ರಕುಮಾರ್ | - ಸದಸ್ಯರು | ತೋ.ಅಧೀಕ್ಷಕರು (ಮಹದೇವಪುರ) |
| 11. | ಎಂ.ಗೌತಮ್ ಕುಮಾರ್ | - ಸದಸ್ಯರು | ಸ.ನಿ.(ಹಣಕಾಸು-ಮಹದೇವಪುರ) |

(ಹಿಂದಿನ ಸಭೆಯ ನಡವಳಿಗಳನ್ನು ಓದಿ ದಾಖಲು ಮಾಡಿಕೊಳ್ಳಲಾಯಿತು)

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಸದಸ್ಯರುಗಳಿಗೆ ಮತ್ತು ಅಧಿಕಾರಿಗಳಿಗೆ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ನಂತರ ಸಮಿತಿಯ ಸದಸ್ಯರುಗಳು ಮತ್ತು ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ ಮಹದೇವಪುರ ವಲಯಕ್ಕೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ ಇದುವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಚರ್ಚಿಸುವ ಸಲುವಾಗಿ ಸಭೆಯನ್ನು ನಿಗಧಿಪಡಿಸಿ, ಸಮಿತಿಯು ಸಭೆಯ ತಿಳುವಳಿಕೆ ಪತ್ರವನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿ ಮಾಡಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕಳುಹಿಸಲಾಗಿದ್ದರೂ, ಕೆಲವು ಅಧಿಕಾರಿಗಳು ಸಭೆಗೆ ಗೈರು ಹಾಜರಾಗಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ, ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ನೋಟೀಸು ಜಾರಿ ಮಾಡುವಂತೆ ಜಂಟಿ ಆಯುಕ್ತರವರಿಗೆ ಸೂಚಿಸಿದರು.

ಮುಂದುವರಿದು ಅಧ್ಯಕ್ಷರು ಮಾತನಾಡುತ್ತಾ, ಬೆಂಗಳೂರು ಮಹಾನಗರ ಪಾಲಿಕೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ ವಿಸ್ತಾರಗೊಂಡ ನಂತರದ ಅಂದರೆ 2006–07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು ಸಮಿತಿಯು ತೀರ್ಮಾನಿಸಿದ್ದು, ಸದರಿ ಸಾಲುಗಳಿಗೆ ಸಂಬಂಧಿಸಿದ ವಿವರವಾದ ವರದಿಯ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಹಾಜರಿದ್ದ ಅಧಿಕಾರಿ/ಸಿಬ್ಬಂದಿಗಳಿಗೆ ಸೂಚಿಸಿದರು.

ನಂತರ ಮುಖ್ಯ ಲೆಕ್ಕಾಧಿಕಾರಿಯವರು ಮಾತನಾಡುತ್ತಾ, ಪಾಲಿಕೆಯ ವ್ಯಾಪ್ತಿಯ ವಿವಿಧ ಕಛೇರಿಗಳಲ್ಲಿನ ವಾರ್ಷಿಕ ಲೆಕ್ಕ ಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಸಂಬಂಧಿಸಿದಂತೆ ಸಭೆಗೆ ಮಾಹಿತಿ ನೀಡುತ್ತಾ, ಮಹದೇವಪುರ ವಲಯಕ್ಕೆ ಸಂಬಂಧಿಸಿದಂತೆ ಒಟ್ಟು 258 ಕಂಡಿಕೆಗಳು ಬಾಕಿ ಇದ್ದು, ಒಟ್ಟು 209.00/– ಕೋಟಿ ಆಕ್ಷೇಪಣೆ ಮೊತ್ತ ಇದ್ದು, ರೂ.417.00/– ಕೋಟಿ ವಸೂಲಾತಿ ಮೊತ್ತ ಇರುವುದಾಗಿ ತಿಳಿಸುತ್ತಾ, ಪ್ರತಿದಿನ ಲೆಕ್ಕ ಪತ್ರ ನಿರ್ವಹಣೆಗೆ ಸಂಬಂಧಿಸಿದಂತೆ ಕನಿಷ್ಠ ಒಂದು ಗಂಟೆಗಳ ಕಾಲ ಕಛೇರಿಯಲ್ಲಿ ಸಮಯವನ್ನು ನಿಗಧಿಪಡಿಸಿಕೊಂಡು ಕೆಲಸವನ್ನು ನಿರ್ವಹಿಸಿದ ಪಕ್ಷದಲ್ಲಿ ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬಹುದೆಂದು, ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಈ ನಿಟ್ಟಿನಲ್ಲಿ ಕಟ್ಟುನಿಟ್ಟಾಗಿ ಕರ್ತವ್ಯ ನಿರ್ವಹಿಸಬೇಕೆಂದು ತಿಳಿಸಿದರು.

ನಂತರ ಅಧ್ಯಕ್ಷರು ಮಾತನಾಡುತ್ತಾ ಕೆ.ಎಂ.ಸಿ ಕಾಯ್ದೆ ಕಲಂ 440. 150ನೇ ಪ್ರಕರಣ ಮತ್ತು IX ನೇ ಅನುಸೂಚಿಯ ಮೇರೆಗಿನ ಕಡ್ಡಾಯ ಕೋರಿಕೆಯ ಉಲ್ಲಂಘನೆಗಾಗಿ ಎಷ್ಟು ಪ್ರಕರಣಗಳಿಗೆ ಜುಲ್ಮಾನೆಯನ್ನು ವಿಧಿಸಲಾಗಿರುತ್ತದೆ ಎಂಬುದರ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದರು.

ಸಭೆಯಲ್ಲಿ ಹಾಜರಿದ್ದ ಜಂಟಿ ಆಯುಕ್ತರವರು ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಸದರಿ ನಿಯಮದ ಅಡಿಯಲ್ಲಿ ಯಾವುದೇ ದಂಡವನ್ನು ವಿಧಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ ಅಗತ್ಯ ಕ್ರಮವನ್ನು ವಹಿಸಲಾಗುವುದೆಂದು ಸಭೆಗೆ ಮಾಹಿತಿ ನೀಡಿದರು.

ಮುಂದುವರಿದು ಅಧ್ಯಕ್ಷರು ಜಂಟಿ ಆಯುಕ್ತರು ರವರಿಗೆ ಮಹೇವಪುರ ವಲಯಕ್ಕೆ ಸಂಬಂಧಿಸಿದಂತೆ ಬಾಕಿ ಇರುವ ಕಂಡಿಕೆಗಳಿಗೆ, ಆಕ್ಷೇಪಣೆಗಳಿಗೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು ಹಾಗೂ ಲೆಕ್ಕ ಪರಿಶೋಧನಾ ವರದಿಗಳ ಆಕ್ಷೇಪಣೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಅಧೀನ ಅಧಿಕಾರಿಗಳಿಂದ ವಿವರಗಳನ್ನು ಪಡೆದು, ವಲಯ ಮಟ್ಟದಲ್ಲಿ ಪರಿಶೀಲಿಸಿ ಸಮಿತಿಗೆ ವರದಿ ಸಲ್ಲಿಸಲು ಹಾಗೂ ಸಭೆಗೆ ಹಾಜರಾಗದೆ ಇರುವ ಅಧಿಕಾರಿಗಳಿಗೆ ಕಾರಣ ಕೇಳಿ ಪತ್ರವನ್ನು ಜಾರಿ ಮಾಡಿ ಸಮಜಾಹಿಷಿಯನ್ನು ಪಡೆದು ಸಮಿತಿಗೆ ಸಲ್ಲಿಸಲು ಜಂಟಿ ಆಯುಕ್ತರವರಿಗೆ ಸೂಚಿಸುತ್ತಾ, ಇನ್ನು ಮುಂದೆ ವಲಯ ಮಟ್ಟದಲ್ಲಿ ಪ್ರತಿ ತಿಂಗಳಿಗೊಮ್ಮೆ ಲೆಕ್ಕಪತ್ರ ನಿರ್ವಹಣೆ ಕುರಿತಂತೆ ಅಧೀನ ಕಛೇರಿಗಳ ಅಧಿಕಾರಿಗಳ ಸಭೆಯನ್ನು ನಿಗಧಿಪಡಿಸಿ, ಚರ್ಚಿಸಿ ಕಾಲಕಾಲಕ್ಕೆ ಸಮಿತಿಗೆ ವರದಿಯನ್ನು ಸಲ್ಲಿಸಲು ಹಾಗೂ ಮುಂದಿನ ದಿನಗಳಲ್ಲಿ ಸಮಿತಿಯು ನಡೆಸುವ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಬೇಕೆಂದು ಸೂಚಿಸಿದರು.

ನಂತರ ಸಭೆಯಲ್ಲಿ ಹಾಜರಿದ್ದ ವಲಯ ಸಹಾಯಕ ಕಂದಾಯ ಅಧಿಕಾರಿ/ಸಿಬ್ಬಂದಿಗಳು ಸಮಿತಿಯು ಕೋರಿರುವ ಎಲ್ಲಾ ವಿವರಗಳನ್ನು ಸಲ್ಲಿಸುವುದಾಗಿ ತಿಳಿಸುತ್ತಾ, ಈಗಾಗಲೇ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ಸಭೆಗೆ ಮಾಹಿತಿ ನೀಡಿದ ಮೇರೆಗೆ, ಮುಂದಿನ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಲು ಸೂಚಿಸಿದರು.

ನಂತರ ಸಮಿತಿಯ ಸದಸ್ಯರಾದ ಶ್ರೀಯುತ ಗೌತಮ್‌ರವರು ಮಾತನಾಡುತ್ತಾ, ಸಮಿತಿಯು ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು, ಪಾಲಿಕೆಯನ್ನು ಆರ್ಥಿಕ ಅಭಿವೃದ್ಧಿಯತ್ತ ಕೊಂಡೊಯ್ಯುವ ನಿಟ್ಟಿನಲ್ಲಿ ಈ ಸಾಲಿನಲ್ಲಿ ಹಲವಾರು ಯೋಜನೆಗಳನ್ನು ಹಮ್ಮಿಕೊಳ್ಳಲ್ಲಿದ್ದು, ಅದಕ್ಕೆ ಪೂರಕವಾಗಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿಯನ್ನು ಸಲ್ಲಿಸಲು ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಕಛೇರಿಯ ಅಧಿಕಾರಿಗಳು ಕರ್ತವ್ಯವನ್ನು ನಿರ್ವಹಿಬೇಕೆಂದು, ಅಲ್ಲದೆ ಸಮಿತಿಯು ಯಾವುದೇ ಸಮಯದಲ್ಲಿ ಕಛೇರಿಗಳಿಗೆ ತಪಾಸಣೆಗೆ ಬರುವುದಾಗಿ ತಿಳಿಸುತ್ತಾ ಲೆಕ್ಕಪತ್ರ ನಿರ್ವಹಣೆಯಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಅಧಿಕಾರಿಗಳ ವಿರುದ್ದ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಲಾಯಿತು.

ಮುಂದುವರಿದು ಹಾಜರಿದ್ದ ವಲಯ ಸಹಾಯಕ ನಿಯಂತ್ರಕರು (ಹಣಕಾಸು–ಮಹದೇವಪುರ) ರವರಿಗೆ ಅವರ ಕಛೇರಿಯ ಕಾರ್ಯವ್ಯಾಪ್ತಿಯ ಬಗ್ಗೆ ಸಭೆಗೆ ಮಾಹಿತಿ ನೀಡಲು ಸೂಚಿಸಲಾಗಿ, ಸದರಿಯವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ವಲಯ ವ್ಯಾಪ್ತಿಯ ಕಛೇರಿಗಳಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಚರ್ಚಿಸಲು ಹಲವಾರು ಸಭೆಗಳನ್ನು ನಡೆಸಿರುವುದಾಗಿ ತಿಳಿಸಿದ್ದು, ಆದಾಗ್ಯೂ ಆಡಿಟ್ ವರದಿಗಳಿಗೆ ಸಮರ್ಪಕವಾಗಿ ಉತ್ತರಗಳನ್ನು ಸಲ್ಲಿಸುವಲ್ಲಿ ಅಧಿಕಾರಿ/ಸಿಬ್ಬಂದಿಗಳು ವಿಫಲರಾಗಿರುತ್ತಾರೆ, ಈ ನಿಟ್ಟಿನಲ್ಲಿ ಇನ್ನು ಮುಂದೆ ಸಕ್ರಿಯವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸುತ್ತಾ, ಸಹಾಯಕ ನಿಯಂತ್ರಕರು ಹಣಕಾಸು ರವರಿಗೆ ಯಾವುದೇ ಹೆಚ್ಚಿನ ಅಧಿಕಾರ ಪ್ರತ್ಯಾಯೋಜನೆ ಮಾಡಿರುವುದಿಲ್ಲವೆಂದು, ಮುಖ್ಯವಾಗಿ ವಲಯ ವ್ಯಾಪ್ತಿಯ ಅಧೀನ ಕಛೇರಿಗಳಿಂದ ಸಲ್ಲಿಸುವ ವಿವಿಧ ವೆಚ್ಚಗಳಿಗೆ ಸಂಬಂಧಿಸಿದ ಬಿಲ್‌ಗಳನ್ನು ಪಾವತಿಸುವುದು ಇತ್ಯಾದಿ ಕರ್ತವ್ಯಗಳನ್ನು ನಿರ್ವಹಿಸುವುದಾಗಿ ತಿಳಿಸಿದಾಗ, ಯಾವುದೇ ಬಿಲ್‌ಗಳನ್ನು ಪಾವತಿಸುವ ಮುಂಚಿತವಾಗಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ಬಿಲ್‌ಗಳನ್ನು ಪಾವತಿಸಲು ಕ್ರಮವಹಿಸಬೇಕೆಂದು ಸೂಚಿಸಲಾಯಿತು.

ಮುಂದುವರಿದು ಅಧ್ಯಕ್ಷರು ಮಾತನಾಡುತ್ತಾ ಅಭಿವೃದ್ಧಿ ಶುಲ್ಕದ ಬಗ್ಗೆ ನ್ಯಾಯಾಲಯದಲ್ಲಿ ಇದ್ದ ದಾವೆಯು ಇತ್ಯರ್ಥಗೊಂಡಿರುವುದಾಗಿ ತಿಳಿದು ಬಂದಿದ್ದು, ಹಲವಾರು ಪ್ರಕರಣಗಳಲ್ಲಿ ಅಭಿವೃದ್ಧಿ ಶುಲ್ಕವನ್ನು ವಸೂಲು ಮಾಡದೇ ಖಾತಾ ನೊಂದಾವಣೆ ಮಾಡಿರುವುದಾಗಿ ದೂರುಗಳು ಬರುತ್ತಿದ್ದು, ಈ ನಿಟ್ಟಿನಲ್ಲೂ ಲೆಕ್ಕ ಪರಿಶೋಧನೆ ಆಕ್ಷೇಪಣೆಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಸಾಧ್ಯವಾಗುತ್ತಿರುವುದಿಲ್ಲವೆಂದು ಮಾಹಿತಿ ಇದ್ದು, ಈ ಬಗ್ಗೆ ವಾಸ್ತವಾಂಶದ ಮಾಹಿತಿಯನ್ನು ಸಭೆಗೆ ನೀಡಲು ತಿಳಿಸಿದಾಗ, ಕಂದಾಯ ವಿಭಾಗದವರು ಕೆಲವು ಪ್ರಕರಣಗಳಲ್ಲಿ ಅಫಿಡವಿಟ್‌ಗಳನ್ನು ಪಡೆದು ನಿವೇಶನಗಳಿಗೆ ಖಾತಾ ನೊಂದಾವಣೆ ಮಾಡಿದ್ದು, ಇನ್ನು ಕೆಲವು ಪ್ರಕರಣಗಳಲ್ಲಿ ನಿವೇಶನದಾರರು ಶೇಕಡ 50ರಷ್ಟು ಶುಲ್ಕವನ್ನು ಪಾವತಿಸಿದ್ದು, ಕೆಲವೊಂದು ಪ್ರಕರಣಗಳಲ್ಲಿ ವ್ಯತ್ಯಾಸದ ಮೊತ್ತವನ್ನು ಪಾವತಿಸಿಕೊಳ್ಳಬೇಕಾಗಿದ್ದು, ಇನ್ನೂ ಕೆಲವು ಪ್ರಕರಣಗಳಲ್ಲಿ ವಿಭಜನೆ ಮಾಡಿ ಖಾತಾ ಮಾಡಲು ಅವಕಾಶ ಇಲ್ಲದೆ ಇರುವುದರಿಂದ ವಸೂಲು ಮಾಡಲು ಸಾಧ್ಯವಿರುವುದಿಲ್ಲವೆಂದು ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಅಭಿವೃದ್ಧಿ ಶುಲ್ಕವನ್ನು ಪಾವತಿಸದೇ ನಿರ್ಮಾಣ ಮಾಡುತ್ತಿರುವ ಕಟ್ಟಡಗಳ ಕಾಮಗಾರಿಯನ್ನು ಸ್ಥಗಿತಗೊಳಿಸಬೇಕೆಂದು, ಕಟ್ಟಡಗಳಿಗೆ ನಕ್ಷೆ ಮಂಜೂರಾತಿ ನೀಡುವಾಗ ನಿಯಮಾನುಸಾರ ಸದರಿ ನಿವೇಶನಕ್ಕೆ ಅಭಿವೃದ್ಧಿ ಶುಲ್ಕವನ್ನು ಪಾವತಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ನಕ್ಷೆ

ಮಂಜೂರಾತಿಯನ್ನು ನೀಡಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸಬೇಕೆಂದು ಹಾಗೂ ನಿವೇಶನಗಳಿಗೆ ಕಂದಾಯವನ್ನು ನಿಗಧಿಪಡಿಸುವಾಗ ಅಳತೆಗಳಲ್ಲಿ ವ್ಯತ್ಯಾಸಗಳನ್ನು ಮಾಡುತ್ತಿರುವುದಾಗಿ ದೂರಗಳು ಬರುತ್ತಿದ್ದು, ಈ ಬಗ್ಗೆ ಮರು ಪರಿಶೀಲನೆ ಮಾಡಿ ಕಂದಾಯವನ್ನು ನಿಗದಿಪಡಿಸಬೇಕೆಂದು ಸಹ ಸೂಚಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಮುಂದಿನ ಸಭೆಯ ದಿನಾಂಕದೊಳಗೆ ಸಮಿತಿಯ ಕಛೇರಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಈ ನಿಟ್ಟಿನಲ್ಲಿ ಸಮಿತಿಯು ಮುಂಬರುವ ದಿನಗಳಲ್ಲಿ ತಪಾಸಣೆಯನ್ನು ಹಮ್ಮಿಕೊಳ್ಳುವುದಾಗಿ ತಿಳಿಸುತ್ತಾ, ಸಭೆಯನ್ನು ವಂದನೆಯೊಂದಿಗೆ ಮುಕ್ತಾಯಗೊಳಿಸಿದರು

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಜಂಟಿ ಆಯುಕ್ತರು (ಮಹದೇವಪುರ) ರವರಿಗೆ ಕಳುಹಿಸುತ್ತಾ, ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ
6.ಮುಖ್ಯ ಲೆಕ್ಕಾಧಿಕಾರಿಯವರ ಮಾಹಿತಿಗಾಗಿ
7.ಕಛೇರಿ ಕಡತಕ್ಕೆ